ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 350
ಸದಸ್ಯರ ಹೆಸರು : ಶ್ರೀ ಎನ್.ಎಸ್. ಬೋಸ್ ರಾಜು
ಉತ್ತರಿಸಬೇಕಾದ ಸಚಿವರು : ಸಾರಿಗೆ ಸಚಿವರು
ಉತ್ತರಿಸಬೇಕಾದ ದಿನಾಂಕ : 18-07-2019

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ರಾಯಚೂರು ನಗರದಲ್ಲಿ ನಗರ ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು:	ರಾಯಚೂರು ನಗರದಲ್ಲಿನ ಬಸ್ ಘಟಕ-1ರ ನಿವೇಶನವು ನಗರದ ಹೃದಯ ಭಾಗದಲ್ಲಿದ್ದು, ಕೇಂದ್ರ ಬಸ್ ನಿಲ್ದಾಣದ ಮುಂಭಾಗದಲ್ಲಿದೆ. ಸದರಿ ನಿವೇಶನದಲ್ಲಿ ನಗರ ಸಾರಿಗೆ ಬಸ್ ನಿಲ್ದಾಣವನ್ನು ನಿರ್ಮಿಸಲು ಸೂಕ್ತವಾಗಿದ್ದು, ಸದರಿ ಕಾಮಗಾರಿಯನ್ನು 2019-20ನೇ ಸಾಲಿನ ಕ್ರಿಯಾ ಯೋಜನೆಯಡಿಯಲ್ಲಿ ಅಳವಡಿಸಲಾಗಿದ್ದು, ಮಂಜೂರಾತಿ ಪ್ರಕ್ರಿಯೆ ಜಾರಿಯಲ್ಲಿದೆ.
(ಆ)	ರಾಯಚೂರು ನಗರದಲ್ಲಿರುವ ಪ್ರಸ್ತುತ ಬಸ್ ನಿಲ್ದಾಣವನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ರಾಯಚೂರು ನಗರದಲ್ಲಿರುವ ಪ್ರಸ್ತುತ ಬಸ್ ನಿಲ್ದಾಣವನ್ನು 2016ನೇ ಸಾಲಿನಲ್ಲಿ ನಿರ್ಮಿಸಿ ಕಾರ್ಯಾಚರಣೆಗೊಳಿಸಲಾಗಿದೆ. ಪ್ರಸ್ತುತ ಸದರಿ ಬಸ್ ನಿಲ್ದಾಣದ ಬಾಕಿ ಆವರಣಕ್ಕೆ ಕಾಂಕ್ರೀಟ್ ಅಳವಡಿಸುವುದು ಹಾಗೂ ಪ್ರಯಾಣಿಕರ ಇಳಿಯುವ ಪ್ಲಾಟಫಾರಂ ನಿರ್ಮಿಸುವುದು ಇತ್ಯಾದಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ.
(ಇ)	ಮಾನ್ವಿ ಪಟ್ಟಣದಲ್ಲಿ ಬಸ್ ಘಟಕ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ಮಾನ್ವಿ ಪಟ್ಟಣದಲ್ಲಿ ಬಸ್ ಘಟಕವನ್ನು ನಿರ್ಮಿಸುವುದಕ್ಕೆ ತೋಟಗಾರಿಕೆ ಇಲಾಖೆಯಿಂದ ಸರ್ವೇ ನಂ.421 ರಲ್ಲಿ 5 ಎಕರೆ ನಿವೇಶನದಲ್ಲಿ ನೂತನ ಬಸ್ ಘಟಕವನ್ನು ನಿರ್ಮಿಸಲು 2019-20ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯ ಕ್ರಿಯಾ ಯೋಜನೆಯಲ್ಲಿ ಅಳವಡಿಸಲಾಗಿದ್ದು, ಕಾಮಗಾರಿಗೆ ಮಂಜೂರಾತಿ ನೀಡಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ.
(ಈ)	ನೈರುತ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಚಾಲಕ ಹಾಗೂ ಚಾಲಕ-ಕಂ-ನಿರ್ವಾಹಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು.	ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಚಾಲಕ ಹಾಗೂ ಚಾಲಕ-ಕಮ್-ನಿರ್ವಾಹಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಟಿಡಿ 29 ಟಿಸಿಕ್ಯೂ 2019

(ಡಿ.ಸಿ.ತಮ್ಮಣ್ಣ)
ಸಾರಿಗೆ ಸಚಿವರು